# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮ ಕಾರ್ಯಾಲಯ, ಕಾವೇರಿ ಭವನ, ಬೆಂಗಳೂರು - 560 009.

ಕವಿಪ್ರನಿನಿ/ಬಿ9/39331/16-17

ದಿನಾಂಕ 10 FEB 2017

## ಸುತ್ತೋಲೆ

ವಿಷಯ:- ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ, ಇತರೆ ಹಿಂದುಳಿದ ವರ್ಗ ಮತ್ತು ಅಲ್ಪ ಸಂಖ್ಯಾತ ವರ್ಗಗಳಿಗೆ ಕೆ. ಟಿ. ಪಿ. ಪಿ ಕಾಯ್ದೆಯಡಿಯಲ್ಲಿ ಮೀಸಲಾತಿ ನೀಡುವ ಬಗ್ಗೆ.

ಉಲ್ಲೇಖ:- 1. ಸರ್ಕಾರದ ಆದೇಶ ಸಂ: SWD 34 BCA 2004 ದಿನಾಂಕ 10/03/2005.
2. ಸುತ್ತೋಲೆ ಸಂ: ಸ. ಕ. ಇ 179 ಸ್ವಿಮರ 2016 ದಿನಾಂಕ 19/12/2016.
3. ಇಂಧನ ಇಲಾಖೆ ಪತ್ರ ಸಂ: ಇ ಎನ್ 1 ವಿಎಸ್‌ಸಿ 2016 / ಪಿ 1 ದಿನಾಂಕ 26/12/2016.

ಕರ್ನಾಟಕ ಸರ್ಕಾರದ ಸಮಾಜ ಕಲ್ಯಾಣ ಇಲಾಖೆಯ ಉಲ್ಲೇಖ (1) ರಲ್ಲಿನ ಆದೇಶದಲ್ಲಿ ಹಾಗೂ ಉಲ್ಲೇಖ (2) ರಲ್ಲಿನ ಸುತ್ತೋಲೆಯಲ್ಲಿ ಕರ್ನಾಟಕ ಸಾರ್ವಜನಿಕ ಉದ್ದಿಮೆಗಳಲ್ಲಿ ಪಾರದರ್ಶಕತೆ ಅಧಿನಿಯಮ ಅಡಿ ರೂ.1.00 ಲಕ್ಷಕ್ಕಿಂತ ಕಡಿಮೆ ಮೊತ್ತದ ಕಾಮಗಾರಿ ಸರಕು ಮತ್ತು ಸೇವೆ ಪ್ರಕರಣಗಳಿಗೆ ಸಂಬಂಧಿಸಿದಂತೆ, ಸಾರ್ವಜನಿಕ ಉದ್ದಿಮೆಗಳಲ್ಲಿ ಪಾರದರ್ಶಕತೆ ಅಧಿನಿಯಮ ಕಾಯ್ದೆಯಿಂದ ಮೀಸಲಾತಿ ನೀಡಲಾಗಿದ್ದು, ಈ ಪೈಕಿ ಶೇಕಡಾ 50 ರಷ್ಟನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ, ಇತರೆ ಹಿಂದುಳಿದ ವರ್ಗಗಳಿಗೆ ಮೀಸಲಾತಿ ನೀಡಲು ಕ್ರಮಕೈಗೊಳ್ಳಲು ಸೂಚಿಸಲಾಗಿದೆ. ಉಲ್ಲೇಖ (3) ರಲ್ಲಿನ ಇಂಧನ ಇಲಾಖೆಯ ಪತ್ರದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸುತ್ತೋಲೆಯನ್ವಯ ಕ್ರಮಕೈಗೊಳ್ಳಲು ಸೂಚಿಸಲಾಗಿದೆ.

ಈ ಹಿನ್ನೆಲೆಯಲ್ಲಿ, ಉಲ್ಲೇಖ (1) ರಲ್ಲಿನ ಸರ್ಕಾರದ ಆದೇಶ ಹಾಗೂ ಉಲ್ಲೇಖ (2) ರಲ್ಲಿನ ಸಮಾಜ ಕಲ್ಯಾಣ ಇಲಾಖೆಯ ಸುತ್ತೋಲೆಯನ್ವಯ ರೂ.1.00 ಲಕ್ಷಕ್ಕಿಂತ ಕಡಿಮೆ ಮೊತ್ತದ, ನಿಗಮದ ಕಾಮಗಾರಿ, ಸರಕು ಮತ್ತು ಸೇವೆ, ಸಂಗ್ರಹಣಾ ಪ್ರಕರಣಗಳಲ್ಲಿ ಹಾಗೂ ಸದರಿ ಆದೇಶದಲ್ಲಿನ ನಿಯಮಾವಳಿಗಳನ್ವಯ ಈ ಕೆಳಕಂಡಂತೆ ಶೇಕಡಾ 50 ರಷ್ಟನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ, ಇತರೆ ಹಿಂದುಳಿದ ವರ್ಗಗಳಿಗೆ ಮೀಸಲಾತಿ ನೀಡುವಂತೆ, ಕ್ರಮಕೈಗೊಳ್ಳಲು ಸೂಚಿಸಲಾಗಿದೆ.

| | | |
|---|---|---|
| *I.* | *Scheduled Castes* | *20%* |
| *II.* | *Scheduled Tribes* | *05%* |
| *III.* | *Other Backward classes* | *20%* |
| *IV.* | *Minorities* | *05%* |

ಉಪ ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ)
ಕವಿಪ್ರನಿನಿ, ಬೆಂಗಳೂರು.

| | |
|---|---|
| EE (IT) | |
| EE (MIS) | |
| DCA (IT) | |
| SEE (IT&MIS) | |

AEE-4
13/2/2017

**ಪ್ರತಿಗಳು:-**

1. ಎಲ್ಲಾ ಮುಖ್ಯ ಇಂಜಿನಿಯರುಗಳು (ವಿ), ಕವಿಪ್ರನಿನಿ.
2. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ.
3. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ)/ (ಸಿವಿಲ್), ಕವಿಪ್ರನಿನಿ.
4. ಎಲ್ಲಾ ಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ.
5. ಅಧೀಕ್ಷಕ ಇಂಜಿನಿಯರ್ (ವಿ), (ಐಟಿ ಮತ್ತು ಎಂಐಎಸ್) – ನಿಗಮದ ಅಂತರ್ಜಾಲದಲ್ಲಿ ಪ್ರಕಟಿಸಲು
6. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರುಗಳು (ವಿ)/ (ಸಿವಿಲ್), ಕವಿಪ್ರನಿನಿ.
7. ಎಲ್ಲಾ ಉಪಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ.
8. ಲೆಕ್ಕಾಧಿಕಾರಿ (ಕೋಡಿಫಿಕೇಷನ್), ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
9. ವ್ಯವಸ್ಥಾಪಕ ನಿರ್ದೇಶಕರು/ ನಿರ್ದೇಶಕರು (ಹಣಕಾಸು)/ ನಿರ್ದೇಶಕರು (ಪ್ರಸರಣ)/ ನಿರ್ದೇಶಕರು (ಆ ಮತ್ತು ಮಾ. ಸಂ). ನಿರ್ದೇಶಕರು ಮತ್ತು ಕಂ. ಕಾ ರವರುಗಳ ಆಪ್ತ ಕಾರ್ಯದರ್ಶಿಗಳು, ಕವಿಪ್ರನಿನಿ, ಕಾವೇರಿ ಬವನ, ಬೆಂಗಳೂರು.